ಕರ್ನಾಟಕ ವಿಧಾನಸಭೆ

ಬುಧವಾರ 07ನೇ ಆಗಸ್ಟ್ 1996ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 11.10 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ರಮೇಶ್‌ಕುಮಾರ್) : ಅವರು ಪೀಠವನ್ನು ಅಲಂಕರಿಸಿದ್ದರು.

---

1. ಅಧ್ಯಕ್ಷರ ಅಪ್ಪಣೆ ಮೇರೆಗೆ.

ವಿಷಯ:- ಕಾವೇರಿ ನದಿ ನೀರಿನ ಹಂಚಿಕೆ.

ಶ್ರೀ ವಾಟಾಳ್ ನಾಗರಾಜ್:- ಮಾನ್ಯ ಅಧ್ಯಕ್ಷರೆ, ಕಾವೇರಿ ನೀರಿನ ಬಗ್ಗೆ ಎಲ್ಲಾ ಪತ್ರಿಕೆಗಳಲ್ಲಿ ಬಂದಿರತಕ್ಕ ಸುದ್ದಿಯನ್ನು ನಾವು ನೋಡಿದ್ದೇವೆ, ಮಾನ್ಯ ಮುಖ್ಯಮಂತ್ರಿಗಳು ತಮಿಳುನಾಡಿಗೆ ಹೋಗಿದ್ದಾರೆ. ಆದ್ದರಿಂದ ಪ್ರಶ್ನೋತ್ತರವನ್ನು ಬದಿಗೊತ್ತಿ ಪ್ರಾಮುಖ್ಯವಾದ ವಿಚಾರವನ್ನು ಚರ್ಚೆಗೆ ತೆಗೆದುಕೊಳ್ಳುವುದು ಒಳ್ಳೆಯದು ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯ. ರಾಜ್ಯಕ್ಕೆ ಬಹಳ ಅನ್ಯಾಯ ಆಗಿದೆ ಎಂಬುದನ್ನು ತಮ್ಮ ಗಮನಕ್ಕೆ ನಾನು ತರುತ್ತಿದ್ದೇನೆ. ನಮಗೆ ಅತ್ಯಂತ ನೋವಾಗಿದೆ. ಇದು ಪ್ರಶ್ನೋತ್ತರಕ್ಕಿಂತ ಬಹಳ ಪ್ರಾಮುಖ್ಯವಾದುದು.

ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು):- ತಮಿಳುನಾಡಿಗೆ ಮುಖ್ಯ ಮಂತ್ರಿಗಳು ಹೋಗಿದ್ದರ ಬಗ್ಗೆ ನಾನು ನಿಮಗೆ ಹೇಳಿದ್ದೇನೆ. ಅಲ್ಲಿ ಏನು ಮಾತುಕತೆ ಆಯಿತು ಸರ್ಕಾರ ಏನು ಒಪ್ಪಿಕೊಂಡು ಬಂದಿದೆ, ಆದರ ಬಗ್ಗೆ ಅವರು ರಿಪ್ಲೈ ಮಾಡಿದರೆ ಒಳ್ಳೆಯದು.

ಶ್ರೀ ವಾಟಾಳ್ ನಾಗರಾಜ್:- ಅವರು ಮಾತಾನಾಡುವುದಕ್ಕೆ ಯಾರನ್ನೂ ಕರೆಯಲಿಲ್ಲ. ಅವರ ಸೂತ್ರಗಳು ಏನು? ಸರ್ಕಾರಕ್ಕೆ ಏನಾಗಿದೆ? ನಾನು ನೋವಿನಿಂದ ಸಭಾತ್ಯಾಗ ಮಾಡುತ್ತಿದ್ದೇನೆ. ಇದು ಸರ್ಕಾರ ಮಾಡಿರತಕ್ಕಂತಹ ಒಂದು ಅಪಚಾರ ಎಂದು ಅತ್ಯಂತ ನೋವಿನಿಂದ ಈ ಮಾತು ಹೇಳು-ತ್ತಿದ್ದೇನೆ. ಕರ್ನಾಟಕಕ್ಕೆ ಆಗಿರತಕ್ಕಂತಹ ಅನ್ಯಾಯ, ಇದು ಆಗಬಾರದು.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ:- ಪ್ರಶ್ನೋತ್ತರ ವೇಳೆ ಆದ ಮೇಲೆ ತಾವು ತೆಗೆದುಕೊಳ್ಳು-ತ್ತೀರಿ ಎಂದು ಅಡ್ಜರ್ನ್‌ಮೆಂಟ್ ಮೋಷನ್ ಕಳುಹಿಸಿದ್ದೆ, ಅದನ್ನು ಈಗಂತೂ ತೆಗೆದುಕೊಳ್ಳುವುದಿಲ್ಲ ಎಂದು ಕಾಣುತ್ತದೆ.

(ಈ ಹಂತದಲ್ಲಿ ಮಾನ್ಯ ಸದಸ್ಯರಾದ ವಾಟಾಳ್ ನಾಗರಾಜ್‌ರವರು ಸಭಾತ್ಯಾಗ ಮಾಡಿದರು)